# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ – ಅಂತಿಮ ಆದೇಶ ಹೊರಡಿಸುವ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:710:ಗ್ರಾಪಂಕಾ:2016, ದಿನಾಂಕ:15–12–2016.
2. ಅಪರ ನಿಬಂಧಕರು, ವಿಚಾರಣೆಗಳು–10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:UPLOK-2/DE-726-2016/ARE-10 ದಿನಾಂಕ:18–08–2018.
3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE-726-2016/ARE-10 ದಿನಾಂಕ:21–08–2018.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ/710/ಗ್ರಾಪಂಕಾ/2016, ದಿನಾಂಕ:04–09–2018.
5. ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:07–11–2018.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–ಎ ರನ್ವಯ ಮಾನ್ಯ ಉಪಲೋಕಾಯುಕ್ತರಿಗೆ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:710:ಗ್ರಾಪಂಕಾ:2016, ದಿನಾಂಕ:15–12–2016 ರಲ್ಲಿ ವಹಿಸಲಾಯಿತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು–10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ":

"ಆಪಾದಿತ ಸರ್ಕಾರಿ ನೌಕರರಾದ ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿಯ 2010–11ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಲ್ಲಿ ಅನರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿರುತ್ತೀರಿ, ಶ್ರೀಮತಿ ಭಾನುಭೀ ಅವರ ಪತಿ ಪೆದ್ದಹುಸೇನ್ ಅವರ ಹೆಸರಿನಲ್ಲಿ ಗೆರಿಗಿರೆಡ್ಡಿಪಾಳ್ಯದಲ್ಲಿ ನಿವೇಶನ ಮತ್ತು ವಾಸಿಸಲು 2 ಅಂತಸ್ತಿನ ಮನೆ ಇದ್ದರೂ ಸಹ, ಶ್ರೀಮತಿ ಭಾನುಬೀ ಅವರನ್ನು ಫಲಾನುಭವಿಯಾಗಿ ಆಯ್ಕೆ ಮಾಡಿದ್ದೀರಿ. ಶ್ರೀಮತಿ ನಾಗಮ್ಮ ಕೋಂ ವೆಂಕಟರವಣಪ್ಪ ಅವರಿಗೆ ಈಗಾಗಲೇ ಮನೆ ಇದ್ದರೂ ಸಹ, ಮತ್ತೊಮ್ಮೆ ಅವರನ್ನು ಫಲಾನುಭವಿಯಾಗಿ ಆಯ್ಕೆ ಮಾಡಿರುತ್ತೀರಿ, ಶ್ರೀಮತಿ ನಾಗವೇಣಿ ಅವರ ಪತಿ ಈಶ್ವರಪ್ಪ ರವರಿಗೆ ವಾಸಿಸಲು ಯೋಗ್ಯವಾದ ಮನೆ ಇದ್ದು ಅವರಿಗೆ ಇಬ್ಬರು ಪತ್ನಿಯರಿದ್ದು, ಇರುವ ಮನೆಯನ್ನು 1ನೇ ಹೆಂಡತಿಗೆ ಮನೆ ನೀಡಿದ್ದು, 2ನೇ ಹೆಂಡತಿಗೆ ಬಸವ ವಸತಿ ಯೋಜನೆಯಡಿ ಮನೆಯನ್ನು ಮಂಜೂರು ಮಾಡಿರುತ್ತೀರಿ.

ಆದಕಾರಣ, ಆಪಾದಿತ ಸರ್ಕಾರಿ ನೌಕರರಾದ ನೀವು, ಸರ್ಕಾರಿ ಸೇವಕರಾಗಿದ್ದು, ನಿಮ್ಮ ಕರ್ತವ್ಯಪಾಲನೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆಯನ್ನು ತೋರಿಸದೆ, ಸ್ವಂತ ಲಾಭಕ್ಕಾಗಿ ಸಾರ್ವಜನಿಕ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದು, ಆಪಾದಿತ ಸರ್ಕಾರಿ ನೌಕರರಾದ ನೀವು ಕರ್ನಾಟಕ ಸರ್ಕಾರಿ ಸೇವಾ (ನಡತೆ) ನಿಯಮಾವಳಿ

1966, ನಿಯಮ 3(1)(i) ರಿಂದ (iii)ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿದ್ದೀರಿ".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ವರದಿಯಲ್ಲಿ ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರವರು ಅಂಗೀಕರಿಸಿ ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ ಇವರ ವಿರುದ್ಧ ಆಪಾದನೆ ಸಾಬೀತಾಗಿರುವುದರಿಂದ, ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ನಿಯಮ 8(vi) ರನ್ವಯ "ನಾಲ್ಕು ವಾರ್ಷಿಕ ವೇತನವನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ ಮತ್ತು ಅವರು ಬಡ್ತಿಗೆ ಪರಿಗಣಿಸಿದ ದಿನಾಂಕದಿಂದ ನಾಲ್ಕು ವರ್ಷಗಳವರೆಗೆ ಮುಂದೂಡುವ" ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರಿಗೆ ನಿಯಮಾನುಸಾರ ಕ್ರಮಸಂಖ್ಯೆ (5)ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರವರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು. ಈ ನೋಟಿಸಿಗೆ ಅವರು ಮೇಲೆ ಕ್ರಮ ಸಂಖ್ಯೆ (6) ರಲ್ಲಿ ಓದಲಾದ ಮನವಿ ಮೂಲಕ ಈ ಕೆಳಗಿನಂತೆ ತಮ್ಮ ಲಿಖಿತ ಸಮಜಾಯಿಷಿಯನ್ನು ಸಲ್ಲಿಸಿರುತ್ತಾರೆ.

"ಶ್ರೀ ನಾರಾಯಣಪ್ಪ, ಚೇಳೂರು ಗ್ರಾಮ ಪಂಚಾಯಿತಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವಾಗ 2010-11ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಲ್ಲಿ ಅನರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ ಅದರಲ್ಲಿ ಶ್ರೀಮತಿ ಭಾನುಭೀ ಇವರ ಗಂಡ ಪೆದ್ದಹುಸೇನ್ ಇವರ ಹೆಸರಿನಲ್ಲಿ ಗೆರಿಗಿರೆಡ್ಡಿ ಪಾಳ್ಯದಲ್ಲಿ ನಿವೇಶನ ಮತ್ತು ವಾಸಿಸಲು ಎರಡು ಅಂತಸ್ತಿನ ಮನೆ ಇರುತ್ತದೆ ಎಂದು, ಶ್ರೀಮತಿ ನಾಗಮ್ಮ ಕೋಂ ವೆಂಕಟರವಣಪ್ಪ ಇವರಿಗೆ ಮನೆ ಇದ್ದರೂ ಫಲಾನುಭವಿಯನ್ನಾಗಿ ಆಯ್ಕೆ ಮಾಡಿರುವುದು ಮತ್ತು ಈಶ್ವರಪ್ಪ ಇವರಿಗೆ ಇಬ್ಬರು ಹೆಂಡತಿಯರಿದ್ದು, ಸದರಿಯವರಿಗೆ ವಾಸಿಸಲು ಯೋಗ್ಯವಾದ ಮನೆಯಿದ್ದರೂ, ಒಂದನೇ ಹೆಂಡತಿಗೆ ಸದರಿ ಮನೆಯನ್ನು ನೀಡಿದ್ದು, ಎರಡನೇ ಹೆಂಡತಿಗೆ ಮನೆಯನ್ನು ಮಂಜೂರು ಮಾಡುವ ಮೂಲಕ ಕರ್ತವ್ಯಲೋಪ ಎಸಗಿರುತ್ತಾರೆಂದು ಮಾಡಿರುವ ಆಪಾದನೆಯು ಸತ್ಯಕ್ಕೆ ದೂರವಾಗಿರುತ್ತದೆ ಈಗಾಗಲೇ ಲಿಖಿತ ಹೇಳಿಕೆಯಲ್ಲಿ ವಿಚಾರಣಾಧಿಕಾರಿಗಳಿಗೆ ಸಲ್ಲಿಸಿರುತ್ತೇನೆ.

ನಾನು ಸುಳ್ಳು ಹಾಗೂ ಸೃಷ್ಟಿಸಿದಂತಹ ದಾಖಲೆಗಳನ್ನು ಹಾಗೂ ಪ್ರಮಾಣಪತ್ರಗಳನ್ನು ಹಾಜರುಪಡಿಸಿರುತ್ತೇನೆ ಎಂಬುದನ್ನು ನಿರಾಕರಿಸಿರುತ್ತೇನೆ. ಮನೆ ಇಲ್ಲದ ವ್ಯಕ್ತಿಗಳಿಗೆ ಮನೆಗಳನ್ನು ಹಂಚಿಕೆ ಮಾಡುವಾಗ ಕರ್ತವ್ಯಲೋಪ ಎಸಗಿರುತ್ತೇನೆ ಎಂಬುದನ್ನು ನಿರಾಕರಿಸಿರುತ್ತೇನೆ. ಆದ್ದರಿಂದ ನನ್ನ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ನಾನು ಈ ಹಿಂದೆ ಲೋಕಾಯುಕ್ತ ತನಿಖಾಧಿಕಾರಿಗಳಿಗೆ ನನ್ನ ವಿವರಣೆಯನ್ನು ಸಲ್ಲಿಸಿರುತ್ತೇನೆ. ನನ್ನ ವಿವರಣೆಯನ್ನು ತನಿಖಾಧಿಕಾರಿಗಳು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 3(ಇ) ಅನುಸಾರ ಪರಿಶೀಲಿಸಿದಂತೆ ಕಂಡುಬರುವುದಿಲ್ಲ. ಗ್ರಾಮ ಸಭೆಯಲ್ಲಿ ಆಯ್ಕೆಗೊಂಡ ಫಲಾನುಭವಿಗಳನ್ನು ತಿದ್ದುವ ಅಥವಾ ಮಾರ್ಪಡಿಸುವ ಅಧಿಕಾರ ನನಗಿರುವುದಿಲ್ಲ. ಗ್ರಾಮ ಸಭೆಯಲ್ಲಿ ಅನುಮೋದನೆಯಾದ ಪಟ್ಟಿಯನ್ನು ಗ್ರಾಮ ಸಭೆಯು ಗ್ರಾಮ ಪಂಚಾಯಿತಿಯ ಸಭೆಗೆ ಸಲ್ಲಿಸಿದ್ದು, ಗ್ರಾಮ ಪಂಚಾಯಿತಿ ಸಭೆಯಲ್ಲೂ ಸಹ ಆಯ್ಕೆ ಪಟ್ಟಿಯನ್ನು ಅನುಮೋದಿಸಿರುತ್ತಾರೆ ಹಾಗೂ ತಾಲ್ಲೂಕು ಹಂತದಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ರಚಿತವಾಗಿರುವ ಸಮಿತಿಯಲ್ಲಿಯು ಸಹ ಫಲಾನುಭವಿಗಳ ಪಟ್ಟಿ ಅನುಮೋದನೆಗೊಂಡಿರುತ್ತದೆ. ದೂರುದಾರರು ಆ ಸಮಯದಲ್ಲಿ ಸಂಬಂಧಪಟ್ಟ ತಾಲ್ಲೂಕು ಪಂಚಾಯಿತಿ ಅಥವಾ ಗ್ರಾಮ ಪಂಚಾಯಿತಿಗೆ ದೂರು ಸಲ್ಲಿಸಿರುವುದಿಲ್ಲ ಒಂದು ವೇಳೆ ದೂರು ಸಲ್ಲಿಸಿದ್ದರೆ, ಅಂತಿಮವಾಗಿ ಆಯ್ಕೆ ಪಟ್ಟಿಯನ್ನು ಅನುಮೋದಿಸುವ ತಾಲ್ಲೂಕು ಹಂತದ ಸಮಿತಿಯಲ್ಲಿ ಚರ್ಚಿಸಲು ಅವಕಾಶ ಲಭ್ಯವಾಗುತ್ತಿತ್ತು. ಆದರೆ ಮಾನ್ಯ ಲೋಕಾಯುಕ್ತರಿಗೆ ಸಲ್ಲಿಸಿರುವ ದೂರಿನಲ್ಲಿ ಉದ್ದೇಶಪೂರ್ವಕವಾಗಿ ನನ್ನನ್ನು ವೈಯಕ್ತಿಕವಾಗಿ ಹೊಣೆಗಾರರನ್ನಾಗಿ ಮಾಡಲಾಗಿದೆ. 2010 ಮತ್ತು 2011ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿ ಫಲಾನುಭವಿಗಳನ್ನು ಗ್ರಾಮ ಸಭೆಯಲ್ಲಿ ನಿಯಮಾನುಸಾರ ವಸತಿ ರಹಿತ,

ಬಾಡಿಗೆ ಮನೆ ಅವಿಭಕ್ತ ಕುಟುಂಬ ಮತ್ತು ಶಿಥಿಲಗೊಂಡಿರುವ ಮನೆಯಲ್ಲಿನ ಫಲಾನುಭವಿಗಳನ್ನು ಆಯ್ಕೆ ಮಾಡಿರುವುದಿಲ್ಲ ಹಾಗೂ ಕರ್ತವ್ಯ ಲೋಪ ಎಸಗಿಲ್ಲದಿರುವುದರಿಂದ ನನಗೆ ಗೌರವಾನ್ವಿತ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವ ಯಾವುದೇ ದಂಡನೆಯನ್ನು ವಿಧಿಸಬಾರದೆಂದು ಮಾನ್ಯರಲ್ಲಿ ವಿನಂತಿಸಿಕೊಳ್ಳುತ್ತೇನೆ." ಸದರಿಯವರ ಲಿಖಿತ ಹೇಳಿಕೆಯನ್ನು ಪರಿಶೀಲಿಸಲಾಗಿದ್ದು, ಸದರಿಯವರು ಅವರ ವಿರುದ್ಧ ಮಾಡಲಾದ ಎಲ್ಲಾ ಆರೋಪಗಳನ್ನು ತಳ್ಳಿಹಾಕಿರುತ್ತಾರೆ.

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪಗಳನ್ನು ಸಾಬೀತುಪಡಿಸಲು ಪ್ರಮುಖವಾಗಿ ವರದಿಯ ಕಂಡಿಕೆಯಲ್ಲಿ ಮೇಲ್ಕಂಡ ಅಂಶಗಳನ್ನು ಅಲ್ಲಗಳೆಯಲು ಸಮರ್ಥವಾದ ಕಾರಣಗಳನ್ನು ನೀಡಿರುತ್ತಾರೆ. ಅವುಗಳ ಸಂಕ್ಷಿಪ್ತ ಸಾರಾಂಶ ಈ ಕೆಳಗಿನಂತಿದೆ.

It is apt to note that, DGO has taken contentions that, it is premature stage, no amount is released and PW-1 has filed false complaint and DGO has acted as per guidelines, but his contentions cannot be accepted for the simple reasons that, on plain perusal of Ex.P-11 Joint Investigation Report, it is seen that, DGO has selected in eligible beneficiaries under Basava Housing Scheme for the year 2010-11 Viz:DGO has selected Smt.Banu.B as per Sl.No.1 of the report; although in the name of her husband Peddda Hussain a site and 2 storied building were there and DGO had also selected Smt. Nagamma; as per Si.No.7 of the report, although her husband Eswarappa is having a house and he gave the same to his 1st Wife and to the 2nd Wife, DGO has granted house under the scheme.

Further, it is a case of Disciplinary Authority that DGO has selected ineligible beneficiaries and granted house/s to them.

Further more, it is the case/contention of the DGO that, Pw-1 has filed false complaint as a s case registered against the relative of Pw-, but it is wholly irrelevant and un acceptable. In view of the above reasons, the contentions taken by the DGO are evoid of merits and unsustainable.

I have gone through the supra noted decision and I am of the humble opinion that, it is not . squarely applicable to the facts and circumstances and situation of this case/DE on the same footing.

On careful analysis and appreciation of oral and documentary evidence placed on record , it is manifestly clear that the evidence of PW 1 & 2 is fully corroborated and consistent with Ex.P1 to 13 and the same are inspiring confidence of this enquiry authority to rely and to act upon and there is nothing brought on record to disbelieve the same. In my considered view, in particular Ex.P-11 Joint Investigation Report, and in general, evidence of PW-1 2 and Ex.P-1 to 10 and 12 & 13 are acceptable.

For the reasons stated above, observations made in the light of dpositions of PW-1, PW-2, DW-1 and EX-.P- to 13 and Ex.-1 to D-6, and under the given set of favts and circumstances of this enquiry, I have arrived at inevitable conclusion an constained to hold that the Disciplinary Authority through its presenting officer is successful in proving the charge framed and leveled against the DGO up to the standard of preponderance of probabilities and to the satisfaction this enquiry authority to tcord my finding, in the affirmative as-proved.

In view of my finding on point No.1 for foregoing reasons and discussions, I proceed to submit enquiry report as under.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರವರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀವ್ರತೆಗೆ ಅನುಗುಣವಾಗಿ ಶ್ರೀ ನಾರಾಯಣಪ್ಪ.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ಆಪಾದನೆ ಸಾಬೀತಾಗಿರುವುದರಿಂದ, ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ನಿಯಮ 8(iii) (iii-a) ರನ್ವಯ "ನಾಲ್ಕು ವಾರ್ಷಿಕ ವೇತನವನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ ಮತ್ತು ಅವರು ಬಡ್ತಿಗೆ ಪರಿಗಣಿಸಿದ ದಿನಾಂಕದಿಂದ ನಾಲ್ಕು ವರ್ಷಗಳವರೆಗೆ ಮುಂದೂಡುವ" ದಂಡನೆ ವಿಧಿಸಲು ಮಾನ್ಯ ಉಪಲೋಕಾಯುಕ್ತರವರು ತಮ್ಮ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ. ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿರುತ್ತವೆ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಪರಿಶೀಲಿಸಿ, ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ಆಪಾದನೆ ಸಾಬೀತಾಗಿರುವುದರಿಂದ, ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ನಿಯಮ 8(iii) (iii-a) ರನ್ವಯ "ನಾಲ್ಕು ವಾರ್ಷಿಕ ವೇತನವನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ ಮತ್ತು ಅವರು ಬಡ್ತಿಗೆ ಪರಿಗಣಿಸಿದ ದಿನಾಂಕದಿಂದ ನಾಲ್ಕು ವರ್ಷಗಳವರೆಗೆ ಮುಂದೂಡುವ" ದಂಡನೆ ವಿಧಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/710/ಗ್ರಾಪಂಕಾ/2016, ಬೆಂಗಳೂರು, ದಿನಾಂಕ:22-03-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ಆಪಾದನೆ ಸಾಬೀತಾಗಿರುವುದರಿಂದ, ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ನಿಯಮ 8(iii) (iii-a) ರನ್ವಯ "ನಾಲ್ಕು ವಾರ್ಷಿಕ ವೇತನವನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ ಮತ್ತು ಅವರು ಬಡ್ತಿಗೆ ಪರಿಗಣಿಸಿದ ದಿನಾಂಕದಿಂದ ನಾಲ್ಕು ವರ್ಷಗಳವರೆಗೆ ಮುಂದೂಡುವ"ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಚಿಕ್ಕಬಳ್ಳಾಪುರ, ಚಿಕ್ಕಬಳ್ಳಾಪುರ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಬಾಗೇಪಲ್ಲಿ, ಚಿಕ್ಕಬಳ್ಳಾಪುರ ಜಿಲ್ಲೆ.
7. ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ.
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.